**ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 999/2022**

| | | | |
|---|---|---|---|
| **ಹೆಸರು** | **:** | **ಮಲ್ಲಿಕಾರ್ಜುನ** | ಚಾ.ಸಾ.10 |
| **ತಂದೆಯ ಹೆಸರು** | **:** | **ಭೀಮರಾವ** | ಪ್ರಾ.ಸಾ.4 |
| **ವಯಸ್ಸು** | **:** | **34 ವರ್ಷ** | ದಿನಾಂಕಃ 27-10-2025 |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ನಾವದಗಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ-11 ರವರು ನಮ್ಮ ಊರಿನವರು. ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದೆ. ಸದರಿ ದಾಖಲೆ ಜಪ್ತಿ ಪಂಚನಾಮೆಯಾಗಿದ್ದು ಅದನ್ನು ನಿಪಿ-15 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು.

ಈಗ 5-6 ವರ್ಷಗಳ ಹಿಂದೆ ಮಧ್ಯಾಹ್ನ 1.00 ಗಂಟೆ ಸುಮಾರಿಗೆ ಹೊಸಳ್ಳಿ ಕ್ರಾಸ್ ಹತ್ತಿರ ಇರುವ ನಮ್ಮ ಹೊಲದಿಂದ ನಾವದಗಿಯಲ್ಲಿರುವ ನಮ್ಮ ಮನೆಗೆ ಹೋಗುತ್ತಿರುವಾಗ ಚಾಸಾ-12ರವರು ನನಗೆ ಕರೆದು ಸಹಿ ಮಾಡು ಎಂದು ಹೇಳಿದಕ್ಕೆ ನಾನು ನಿಪಿ-15ರಲ್ಲಿ ಹೊಸಳ್ಳಿ ಗೇಟ ಹತ್ತಿರ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ನನಗೆ ಗೊತ್ತಿಲ್ಲ. ಈಗ ನೋಡುತ್ತಿರುವ ಎರಡು ಭಾವಚಿತ್ರಗಳಲ್ಲಿ ನಾನು ಇದ್ದೇನೆ. ಸದರಿ ಭಾವಚಿತ್ರಗಳನ್ನು ನಿಪಿ-16 ಮತ್ತು 17 ಎಂದು ಗುರುತಿಸಲಾಯಿತು. ನಿಪಿ-16 ಮತ್ತು 17 ರ ಭಾವಚಿತ್ರಗಳು ಎಲ್ಲಿ ಪಡೆದುಕೊಂಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಟಾವರ ಹತ್ತಿರ ಹೋಗಿದ್ದು ನನಗೆ ನೆನಪಿಲ್ಲ. ಪೋಲಿಸರು ನನಗೆ ಬ್ಯಾಟರಿ ಇನ್ನಿತರ ವಸ್ತುಗಳನ್ನು ತೋರಿಸಿದ್ದಾರೆ. ಈಗ ನೋಡುತ್ತಿರುವ ಎರಡು ಬ್ಯಾಟರಿ ಸೆಲ್ಲುಗಳು ನಾನು ಪಂಚನಾಮೆ ಮಾಡಿದ ಸ್ಥಳದಲ್ಲಿ ನೋಡಿರುವ ಬಗ್ಗೆ ನನಗೆ ನೆನಪಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಪಂಚನಾಮೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 22-02-2017 ರಂದು ಸಹಿ ಮಾಡಿದ್ದೇನೆ ಎಂದರೆ ನನಗೆ ನೆನಪಿಲ್ಲ. ಆರೋಪಿತರು ಪಂಚನಾಮೆ ಮಾಡುವ ಸ್ಥಳದಲ್ಲಿ ಆರೋಪಿತರ ಸ್ಥಳ ಪೋಲಿಸರಿಗೆ ತೋರಿಸಿರುತ್ತಾರೆ ಎಂದರೆ ನನಗೆ ನೆನಪಿಲ್ಲ.

ಈಗ ನೋಡುತ್ತಿರುವ ನಿಪಿ-16 ಮತ್ತು 17ರ ಭಾವಚಿತ್ರದಲ್ಲಿ ನ್ಯಾಯಾಲಯದ ಮುಂದೆ ಇರುವ ಆರೋಪಿತರು ಇದ್ದಾರೆ ಎಂದರೆ ಸರಿ. ಸ್ಥಳದಲ್ಲಿ ಬ್ಯಾಟರಿಗಳು ಕಳ್ಳತನ ಆಗಿರುವ ಕಾರಣ ಪೋಲಿಸರು ಪಂಚನಾಮೆ ಮಾಡಲು ಬಂದಿದ್ದರು ಎಂದರೆ ಸರಿ. ಆದ್ದರಿಂದ ನಾನು ಮತ್ತು ಚಾಸಾ-11ರವರು ಪಂಚನಾಮೆಯಲ್ಲ್ ಸಹಿ ಮಾಡಿದ್ದೇವೆ ಎಂದರೆ ಸರಿ. ಈಗ ನೋಡುತ್ತಿರುವ ಎರಡು ಬ್ಯಾಟರಿ ಸೇಲ್ಲುಗಳು ನನ್ನ ಸಮಕ್ಷಮ ಜಪ್ತಿ ಮಾಡಿಕೊಂಡಿದ್ದಾರೆ ಎಂದರೆ ನನಗೆ ನೆನಪಿಲ್ಲ. ಜಪ್ತಿ ಮಾಡಿಕೊಂಡಿರುವ ಬಗ್ಗೆ ನನಗೆ ಗೊತ್ತಿದ್ದರು ಸಹ ಆರೋತರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**